




## ಹೊರೆ ತಗ್ಗಿಸಿದ ಜನೌಷಧಿ ಮಳಿಗೆಗಳು

ದೇಶದಲ್ಲಿ ಬಡವರಿಗೆ ಕೈಗೆಟುಕುವ ಬೆಲೆಯಲ್ಲಿ ಅವಶ್ಯಕ ಔಷಧಗಳು ಸಿಗುವುದಿಲ್ಲ ಎಂಬ ಕಾರಣಕ್ಕೆ ಜನೌಷಧ ಮಳಿಗೆಗಳು ಈಗಾಗಲೇ ಆರಂಭವಾಗಿದ್ದು. ಕೇಂದ್ರ ಸರ್ಕಾರದ ಪ್ರಾಯೋಜಿತ ಯೋಜನೆಯನ್ನು ಅತ್ಯಂತ ದಕ್ಷ ರೀತಿಯಲ್ಲಿ ಅನುಷ್ಠಾನಗೊಳಿಸಿದ ಕೀರ್ತಿ ರಾಜ್ಯ ಸರ್ಕಾರಕ್ಕೆ ಸಲ್ಲುತ್ತದೆ. ಕೆಲವು ಖಾಸಗಿ ವೈದ್ಯರು ಮತ್ತು ಫಾರ್ಮಸಿಗಳ ನಡುವಿನ ಅಪವಿತ್ರ ಮೈತ್ರಿಯಿಂದಾಗಿ ಜನರು ದುಬಾರಿ ಬೆಲೆಯ ಔಷಧಿಗಳನ್ನು ಖರೀದಿಸಬೇಕಾಗುತ್ತಿತ್ತು.

ಜನೌಷಧಿ ಜಾರಿಗೆ ಬಂದ ಬಳಿಕ ಬಡವರ ಔಷಧದ ಖರ್ಚಿನಲ್ಲಿ ಶೇ 50 ರಷ್ಟು ಉಳಿತಾಯವಾಗುತ್ತಿದೆ. ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿಯೇ ಜನೌಷಧಿ ಮಳಿಗೆಗಳನ್ನು ತೆರೆದು ಕಡಿಮೆ ಬೆಲೆಗೆ ಗುಣಮಟ್ಟದ ಔಷಧ ಸಿಗುವಂತೆ ಮಾಡಲಾಗಿದೆ. ರಾಜ್ಯದಲ್ಲಿ ಈಗಾಗಲೇ 88 ಜನೌಷಧಿ ಮಳಿಗೆಗಳನ್ನು ತೆರೆಯಲಾಗಿದೆ. ಇನ್ನುಳಿದ 112 ಜನೌಷಧಿ ಜನರಿಕ್ ಮಳಿಗೆಗಳನ್ನು ಆರಂಭಿಸಲು ಉದ್ದೇಶಿದ್ದು, 2018 ಮಾರ್ಚ್ ಒಳಗೆ ಪ್ರಾರಂಭಗೊಳುತ್ತವೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಮಾತ್ರೆ, ಔಷಧಿಗಳನ್ನು ನೀಡಬೇಕು ಎಂಬ ಕಟ್ಟುನಿಟ್ಟಿನ ಆದೇಶವಿದೆ. ಆದರೆ, ಕೆಲವು ವೈದ್ಯರು ಆದೇಶವನ್ನು ಕಡೆಗಣಿಸಿ ಖಾಸಗಿಯವರಿಂದ ಔಷಧಿ ಖರೀದಿಸಲು ಚೀಟಿ ಬರೆದುಕೊಡುತ್ತಿದ್ದಾರೆ. ಇದರಿಂದ ಜನರಿಗೆ ತೊಂದರೆ ಆಗುತ್ತಿರುವುದನ್ನು ಮನಗಂಡ ರಾಜ್ಯ ಸರ್ಕಾರ ಹೊರಗೆ ಔಷಧಿ ಖರೀದಿಸಲು ಚೀಟಿ ಬರೆದು ಕೊಡಬಾರದು ಎಂದು ಕಟ್ಟಪ್ಪಣೆ ಮಾಡಿದೆ. ಇದಕ್ಕೆ ಪೂರಕವಾಗಿ ಔಷಧಿ ಪೂರೈಕೆ ಮತ್ತು ವಿತರಣೆ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಇದರಿಂದಾಗಿ ಹೊರಗಡೆ ಔಷಧಿ ಬರೆದುಕೊಡುವ ವ್ಯವಸ್ಥೆಗೆ ಪೂರ್ಣ ವಿರಾಮ ಬಿದ್ದಿದೆ.

''ಎಲ್ಲರಿಗೂ ಆರೋಗ್ಯ; ಎಲ್ಲೆಡೆಯೂ ಆರೋಗ್ಯ''